9. ವೈಶಾಕ V/S ರಾಜಸ್ಥಾನದ ರಾಜ್ಯ ಸರ್ಕಾರದ ಮೊಕದ್ದಮೆಗೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿ/ವಿದ್ಯಾರ್ಥಿ, ಗಲಭೆಯನ್ನು ಉಂಟುಮಾಡುವುದಾಗಲೀ ಅಥವಾ ಯಾವುದೇ ವ್ಯಕ್ತಿಯಿಂದ(ಬೋಧಕ/ ಬೋಧಕೇತರ/ ಆಡಳಿತಮಂಡಳಿ) ಅಥವಾ , ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

10. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ಅವರಿಗೆ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

11. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

12. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

13. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

14. *ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.*

15. 2017-18ನೇ ಸಾಲಿಗೆ ಸದರಿ ಕೋರ್ಸುಗಳ ಸಂಯೋಜನಾ ನವೀಕರಣಕ್ಕಾಗಿ ಅರ್ಜಿಯನ್ನು ತಪ್ಪದೇ ಸಲ್ಲಿಸತಕ್ಕದ್ದು.

*ವಿ.ಸೂ.1: ಎಂ.ಬಿ.ಎ. ಕೋರ್ಸಿನ ಸಂಯೋಜನೆಗೆ ಕೆ.ಎಸ್.ಯು ಅಧಿನಿಯಮ 2000ದ ಪ್ರಕರಣ 59(13)ರಲ್ಲಿ ಎ.ಐ.ಸಿ.ಟಿ.ಇ. ಅನುಮೋದನೆ ಅವಶ್ಯಕವಾಗಿದ್ದು, ಕಾಲೇಜಿನವರು ಎ.ಐ.ಸಿ.ಟಿ.ಇ. ಅನುಮೋದನೆಯ ದಾಖಲೆಗಳನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ನಂತರ ಈ ಬಗ್ಗೆ ಕ್ರಮವಹಿಸಲಾಗುವುದು. ಎ.ಐ.ಸಿ.ಟಿ.ಇ. /ವಿಶ್ವವಿದ್ಯಾಲಯದ ಅನುಮೋದನೆ ಇಲ್ಲದೇ ಎಂ.ಬಿ.ಎ. ಕೋರ್ಸಿಗೆ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡತಕ್ಕದ್ದಲ್ಲ.*

ವಿ.ಸೂ.2: *ಕಾಲೇಜು ಯಾವುದೇ ಕಾರಣಕ್ಕೂ ವಿಶ್ವವಿದ್ಯಲಯವು ಪ್ರವೇಶಾತಿಗೆ ನಿಗಧಿಪಡಿಸಿದ ಅಂತಿಮ ದಿನಾಂಕದ ನಂತರ ಯಾವುದೇ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದಲ್ಲ.*

ಆಜ್ಞೆ ಮೇರೆಗೆ

ಕುಲಸಚಿವರು 23/08/16

ಗೆ,

ಪ್ರಾಂಶುಪಾಲರು,
ಐ.ಎಫ್.ಐ.ಎಂ. ಕಾಲೇಜು,
ನಂ.8ಪಿ ಮತ್ತು 9ಪಿ, ಕೆ.ಐ.ಎ.ಡಿ.ಬಿ. ಇಂಡಸ್ಟ್ರಿಯಲ್ ಏರಿಯಾ,
ಎಲೆಕ್ಟ್ರಾನಿಕ್ ಸಿಟಿ ಅಂಚೆ, 1ನೇ ಫೇಸ್, ಬೆಂಗಳೂರು-560 100.

ಪ್ರತಿಗಳು:

1) ಅಪರ ಮುಖ್ಯ ಕಾರ್ಯದರ್ಶಿಯವರು, ಉನ್ನತ ಶಿಕ್ಷಣ ಇಲಾಖೆ (ವಿಶ್ವ ವಿದ್ಯಾಲಯ) , ಅಂಬೇಡ್ಕರ್ ವೀಧಿ, ಬೆಂಗಳೂರು-1
2) ನಿರ್ದೇಶಕರು, ಶಿಕ್ಷಣ ಆಯುಕ್ತರು, ಬೆಂಗಳೂರು-1.
3) ಕುಲಸಚಿವರು (ಮೌಲ್ಯಮಾಪನ), ಬೆಂ. ವಿ. ಬೆಂಗಳೂರು.
4) ಸಂಬಂಧಪಟ್ಟ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರುಗಳಿಗೆ, ಬೆಂ.ವಿ., ಬೆಂಗಳೂರು.
5) ಉಪ ಕುಲಸಚಿವರು : ಅಧೀಕ್ಷಕರು ಶೈಕ್ಷಣಿಕ ವಿಭಾಗ-1/4, ಬೆಂ. ವಿ. ಬೆಂಗಳೂರು-56-ಸೀಟ್ ಮ್ಯಾಟ್ರಿಕ್ಸ್‌ನಲ್ಲಿ ಸೇರಿಸಲು.

# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/ಹೊ.ಕೋ.ಸಂ/IFIM/2016-2017

ಜ್ಞಾನಭಾರತಿ
ಬೆಂಗಳೂರು-56
ದಿನಾಂಕ:23-08-2016

## ಅಧಿಸೂಚನೆ

ವಿಷಯ : 2016-2017ನೇ ಸಾಲಿಗೆ ಬೆಂಗಳೂರಿನ ಐ.ಎಫ್.ಐ.ಎಂ. ಕಾಲೇಜಿಗೆ ಹೊಸ ಕೋರ್ಸುಗಳ ಸಂಯೋಜನೆ ನೀಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರದ ಸಂಖ್ಯೆ ಇಡಿ:200:ಯು.ಬಿ.ವಿ.:2016 ದಿ:18-08-2016.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 11ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ವಿಶ್ವವಿದ್ಯಾಲಯವು 2016-2017ನೇ ಸಾಲಿನಿಂದ ಬೆಂಗಳೂರಿನ ಐ.ಎಫ್.ಐ.ಎಂ. ಕಾಲೇಜಿಗೆ ಕೆಳಗೆ ನಮೂದಿಸಿರುವ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸಂಯೋಜನೆಯನ್ನು ಮಂಜೂರು ಮಾಡಿದೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಎಂ.ಕಾಂ. | ವಿ.ವಿ. ಪರಿನಿಯಮಾವಳಿಯಂತೆ | 40 (ನಲವತ್ತು) |

ಷರತ್ತುಗಳು:

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಕಾಲಕ್ಕೆ ಅನುದಾನವನ್ನು ಮಂಜೂರುಮಾಡುವುದಿಲ್ಲ. ಅದು ಶಾಶ್ವತ ಅನುದಾನ ರಹಿತ ಕೋರ್ಸು ಎಂದು ಪರಿಗಣಿಸತಕ್ಕದ್ದು.
2. ಜಾರಿಯಲ್ಲಿರುವ/ಕಾಲಕಾಲಕ್ಕೆ ಹೊರಡಿಸುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
3. ಮೇಲ್ಕಂಡ ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಅನುಮತಿ ಇಲ್ಲದೆ ವಿದ್ಯಾರ್ಥಿ ಪ್ರವೇಶವನ್ನು ಹೆಚ್ಚಿಸಬಾರದು.
4. ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪೂರೈಸಬೇಕು.
5. ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
6. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು. ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಂಡಲ್ಲಿ ಸಂಯೋಜನೆಯನ್ನು ರದ್ದುಪಡಿಸಲಾಗುವುದು.
7. *ಮೇಲ್ಕಂಡ ಸ್ನಾತಕೋತ್ತರ ಪದವಿ ಕೋರ್ಸಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸುವ ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳಿಂದ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.*
8. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು, ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

. . 2. . .